## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆಃ 773/2024

**ಸಾಕ್ಷಿಯನ್ನು ದಿಃ 09.12.2025 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

| | | | |
|---|---|---|---|
| ಹೆಸರು | ಚನ್ನಯ್ಯ | ಸಿಡಬ್ಲ್ಯೂಃ 5 | ಪಿಡಬ್ಲ್ಯೂಃ 4 |
| ತಂದೆಯ ಹೆಸರು | ಸಣ್ಣಯ್ಯ | | |
| ವಯಸ್ಸು | 65 ವರ್ಷ | | |
| ಕೆಲಸ | ಕೂಲಿ ಕೆಲಸ | | |
| ವಾಸಸ್ಥಳ | ರಂಗನಾಥ ಬಡಾವಣೆ, ಕಲ್ಲುಣಿಕೆ | | |

### ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ಸಾಕ್ಷಿ ನಿಪಿ–2ರ ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ–2(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 3 ವರ್ಷಗಳ ಹಿಂದೆ ಚಾಸಾ–1 ರವರ ಮನೆಯ ಹತ್ತಿರ ಗಲಾಟೆಯ ವಿಚಾರವಾಗಿ ಹಾಕಿದ್ದೇನೆ. ನನ್ನ ಜೊತೆ ಚಾಸಾ–6 ರವರು ಹಾಜರಿದ್ದರು. ಮಹಜರು ಮಾಡಿದಾಗ ಸುಮಾರು ಒಂದು ಗಂಟೆಯಾಗಿರಬಹುದು.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

### ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

ದಿಃ 06.12.2022ರಂದು ಪೊಲಿಸರು ಘಟನೆಗೆ ಸಂಬಂಧಿಸಿದಂತೆ ಚಾಸಾ–1 ರವರ ಮನೆಯ ಹತ್ತಿರ ಮಹಜರಿಗೆ ಬಂದಿದ್ದಾಗ ನಾನು ಹಾಜರಿದ್ದು, ನಿಪಿ–2ಕ್ಕೆ ಸಹಿ ಹಾಕಿದ್ದೇನೆ ಎಂದರೆ ಸರಿಯಲ್ಲ. ಆಗ ಚಾಸಾ–1 ರವರು ಹಾಜರಿದ್ದು, ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ–6 ರವರ ಸಮಕ್ಷಮ ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ ನಿಪಿ–2ರ ಮಹಜರು ಮಾಡಲಾಗಿದೆ ಎಂದರೆ ಸರಿಯಲ್ಲ. ನನಗೆ ನಿಪಿ–2ರ ಬಗ್ಗೆ ಸಂಪೂರ್ಣ ಮಾಹಿತಿ

ಇದ್ದರೂ ಸಹ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ. DRM ವಕೀಲರಿಂದಃ**

ನಾನು ನಿಪಿ-2ರ ಮಹಜರಿಗೆ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದರೂ ಕೂಡ ಆರೋಪಿಗೆ ತೊಂದರೆ ಕೊಡಲೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.